ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಬುಧವಾರ, ದಿನಾಂಕ : 23 ನೇ ಸೆಪ್ಟೆಂಬರ್, 2020

ರಾಜ್ಯದಲ್ಲಿ ಕಳಪೆ ಬಿತ್ತನೆ ಬೀಜ ನೀಡಿರುವ ಕುರಿತು

ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

387 (438) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಪ್ರಸಕ್ತ ಸಾಲಿನಲ್ಲಿ ಸೊಯಾಬಿನ್ ಬೀಜಗಳು ಕಳಪೆ ಮಟ್ಟದಲ್ಲಿರುವುದರಿಂದ ರೈತರು ಸೊಯಾಬಿನ್ ಬೀಜಗಳ ಬಿತ್ತನೆಯನ್ನು ಹೊರತುಪಡಿಸಿ ಉದ್ದು, ಹೆಸರು ಇನ್ನಿತರ ಬೀಜಗಳನ್ನು ಬಿತ್ತನೆ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸೊಯಾಬಿನ್ ಬಿತ್ತನೆ ಬೀಜಗಳು ಕಳಪೆ ಮಟ್ಟದಲ್ಲಿದೆ ಎಂದು ಸರ್ಕಾರ ರೈತರಿಗೆ ಮಾಹಿತಿ ನೀಡಿದ್ದರೂ, ಕೃಷಿ ಅಧಿಕಾರಿಗಳು ತಾಲ್ಲೂಕು, ಗ್ರಾಮಗಳಿಗೆ ಹೋಗಿ ಸೊಯಾಬಿನ್ ಬಿತ್ತನೆ ಬೀಜಗಳನ್ನು ಸರಬರಾಜು ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಮರು ಬಿತ್ತನೆಗೆ ಸರ್ಕಾರದ ಕೈಗೊಂಡ ಕ್ರಮಗಳೇನು ;

(ಇ) ಕೃಷಿ ಅಧಿಕಾರಿಗಳು ಹಂಚಿಕೆ ಮಾಡಿರುವ ಸೊಯಾಬಿನ್ ಬಿತ್ತನೆ ಬೀಜಗಳು ಕಳಪೆ ಮಟ್ಟದಿಂದ ಕೂಡಿದ್ದು, ಬಿತ್ತನೆ ಮಾಡಿದ ಬೀಜಗಳು ಮೊಳಕೆ ಬಾರದ ಕಾರಣ, ರೈತರು ಮರು ಬಿತ್ತನೆ ಮಾಡಿ, ರೈತರಿಗೆ ಅನ್ಯಾಯವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಅಂತಹ ಕೃಷಿ ಅಧಿಕಾರಿಗಳ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ ?